ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಸರ್ಕಾರಿ ಪಿಂಚಣಿ (ಸಂಧ್ಯಾ ಸುರಕ್ಷಾ, ವಿಧವಾ ವೇತನ ಇತ್ಯಾದಿ) ನಿರ್ವಹಣೆ ಕುರಿತು

ಶ್ರೀ ಕೆ.ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

182 (308) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಾಶಾಸನ (ಪಿಂಚಣಿ) ಯೋಜನೆಯಡಿಯಲ್ಲಿ ಸಂಧ್ಯಾ ಸುರಕ್ಷಾ, ವಿಧವಾ ವೇತನ ಇತ್ಯಾದಿ ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಆ) ಕಳೆದ ಕೆಲವು ತಿಂಗಳಿನಿಂದ ಸರ್ಕಾರ ನೀಡುತ್ತಿರುವ ಪಿಂಚಣಿ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ಬಡವರಿಗೆ, ಹಿರಿಯ ನಾಗರೀಕರಿಗೆ ತುಂಬಾ ತೊಂದರೆಯಾಗಿದ್ದು, ಈ ಕುರಿತಂತೆ ಸರ್ಕಾರದ ನಿಲುವುಗಳೇನು?